ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

## ಪೊಲೀಸ್ ಆಯುಕ್ತರಿಗೆ ಸಿಡಿ ಲೇಡಿ ಪತ್ರ | ಎಸ್‌ಐಟಿ ಕಾರ್ಯವೈಖರಿ ಬಗ್ಗೆ ಅಸಮಾಧಾನ

# ನಾನು ಆರೋಪಿಯೋ, ಸಂತ್ರಸ್ತೆಯೋ?

5/4/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು



ಎಸ್‌ಐಟಿ ಬಗ್ಗೆ ಮೊದಲಿಂದಲೂ ಅನುಮಾನ ವ್ಯಕ್ತಪಡಿಸುತ್ತಾ ಬಂದಿರುವ ರಾಸಲೀಲೆ ಪ್ರಕರಣದ ಸಂತ್ರಸ್ತ ಯುವತಿ ಬೆಂಗಳೂರು ಪೊಲೀಸ್ ಆಯುಕ್ತರಿಗೆ ಪತ್ರ ಬರೆದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಎಸ್‌ಐಟಿ ನಾನು ಕೊಟ್ಟಿರುವ ದೂರಿನ ಕುರಿತು ವಿಚಾರಣೆ ನಡೆಸುತ್ತಿದೆ. ನನ್ನನ್ನು ಸತತ ಐದು ದಿನಗಳಿಂದ ವಿಚಾರಣೆ ನಡೆಸುತ್ತಿದ್ದಾರೆ. ಆದರೆ, ನಾನು ಆರೋಪ ಮಾಡಿರುವ ವ್ಯಕ್ತಿಯನ್ನು ಈವರೆಗೆ ವಿಚಾರಣೆ ನಡೆಸಿಲ್ಲ, ವಿಚಾರಣೆ ವೇಳೆ ನನ್ನನ್ನೇ ಆರೋಪಿ ಎಂಬಂತೆ ಎಸ್‌ಐಟಿ ಪೊಲೀಸರು ಪರಿಗಣಿಸುತ್ತಿರುವುದು ಕಂಡುಬರುತ್ತಿದೆ. ಪೊಲೀಸರ ನಡೆಯಿಂದ ನನಗೆ ನಾನು ಆರೋಪಿಯೋ, ಸಂತ್ರಸ್ತೆಯೋ ಎಂಬ ಅನುಮಾನ ಕಾಡುತ್ತಿದೆ ಎಂದು ಪತ್ರದಲ್ಲಿ ಉಲ್ಲೇಖ ಮಾಡಿದ್ದಾರೆ.

ಎಸ್‌ಐಟಿ ಪೊಲೀಸರೇ ಪಿಜಿಯಲ್ಲಿ ಸಾಕ್ಷ್ಯ ನಾಶ ಮಾಡುವ ಪ್ರಯತ್ನ ನಡೆಸುತ್ತಿದ್ದಾರೆ. ರಮೇಶ್ ಜಾರಕಿಹೊಳಿ ಅವರ ಪರವಾಗಿ ಪೊಲೀಸರು ಕೆಲಸ ಮಾಡುತ್ತಿದ್ದಾರೆ. ರಮೇಶ್ ಅವರು ನನ್ನ ಚಾರಿತ್ರ್ಯ ವಧೆ ಮಾಡಿದ್ದಾರೆ. ನನ್ನ ಬಗ್ಗೆ ಕೆಟ್ಟದಾಗಿ ಮಾತನಾಡಿದ್ದಾರೆ. ಆದರೂ, ಎಸ್‌ಐಟಿ ಪೊಲೀಸರು ಅವರನ್ನು ವಿಚಾರಣೆಗೆ ಈವರೆಗೆ ಕರೆದಿಲ್ಲ. ನನ್ನ ಸಹಮತವಿಲ್ಲದೆ ಸರಕಾರಿ ಅಭಿಯೋಜಕರನ್ನು ನೇಮಕ ಮಾಡಲಾಗಿದೆ. ಒಟ್ಟಾರೆ, ಎಸ್‌ಐಟಿ ಪ್ರಕ್ರಿಯೆ ಮೇಲೆ ನನಗೆ ವಿಶ್ವಾಸವಿಲ್ಲದಂತಾಗಿದೆ ಎಂದು ಪತ್ರದಲ್ಲಿ ಅಳಲು ತೋಡಿಕೊಂಡಿದ್ದಾರೆ.

ಸಂತ್ರಸ್ತೆಯ ಪತ್ರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿರುವ ಯುವತಿ ಪರ ವಕೀಲ ಜಗದೀಶ್, ರಮೇಶ್ ಜಾರಕಿಹೊಳಿ ಆರೋಪದಿಂದ ಮುಕ್ತರಾಗಿ ಹೊರಬರುತ್ತಾರೆ ಎಂಬ ಸಿಎಂ ಹೇಳಿಕೆಯಿಂದಲೇ ಸರಕಾರ ರಮೇಶ್ ಜಾರಕಿಹೊಳಿ ಅವರ ಬೆನ್ನಿಗೆ ನಿಂತಿರುವುದು ಗೊತ್ತಾಗುತ್ತದೆ. ಎಸ್‌ಐಟಿ ಮೇಲೆ ಸರಕಾರದ ಒತ್ತಡ ಇರುವುದು ಇದರಿಂದ ಸ್ಪಷ್ಟವಾಗುತ್ತದೆ. ಪಿಜಿಯಲ್ಲಿ ಲಕ್ಷಾಂತರ ರು. ಹಣ ಸಿಕ್ಕಿದೆ ಎಂದು ಹೇಳುತ್ತಾರೆ. ಯಾವುದೇ ಆಧಾರವಿಲ್ಲದೆ ಪಿಜಿ ಮೇಲೆ ದಾಳಿ ಮಾಡಿದ್ದೇಕೆ ಎಂಬ ಪ್ರಶ್ನೆಗಳು ಹುಟ್ಟುತ್ತವೆ. ಒಟ್ಟಾರೆ, ಎಸ್‌ಐಟಿ ಜನರನ್ನು ದಾರಿ ತಪ್ಪಿಸುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

**ಪತ್ರದಲ್ಲಿ ಏನಿದೆ ?:** 'ಕೆಲಸ ಕೊಡಿಸುವುದಾಗಿ ಮಾಜಿ ಸಚಿವ ರಮೇಶ್ ಜಾರಕಿಹೊಳಿ ನನ್ನನ್ನು ಲೈಂಗಿಕವಾಗಿ ಬಳಸಿಕೊಂಡಿದ್ದಾರೆ ಎಂದು ಆರೋಪಿಸಿ ವಕೀಲರ ಮೂಲಕ ಮಾ.26 ರಂದು ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಗೆ ದೂರು ನೀಡಿದ ಮೇರೆಗೆ ಮಾಜಿ ಸಚಿವರ ವಿರುದ್ಧ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಈ ನಡುವೆ ಮ್ಯಾಜಿಸ್ಟ್ರೇಟ್ ನ್ಯಾಯಾಧೀಶರ ಮುಂದೆ ಸಿಆರ್‌ಪಿಸಿ 164 ಅಡಿ ಹೇಳಿಕೆ ನೀಡಿದ್ದೇನೆ. ಬಳಿಕ ಎಸ್‌ಐಟಿ ಅಧಿಕಾರಿಗಳು ಆಡುಗೋಡಿ ವಿಚಾರಣಾ ಕೇಂದ್ರಕ್ಕೆ ನನ್ನನ್ನು ಕರೆದೊಯ್ದರು. ಸಿಸಿಬಿ ಜಂಟಿ ಆಯುಕ್ತ ಸಂದೀಪ್ ಪಾಟೀಲ್ ಹಾಗೂ ತನಿಖಾಧಿಕಾರಿ ಎಸಿಪಿ ಕವಿತಾ ಸೆಕ್ಷನ್ 161ರಡಿ ವಿಚಾರಣೆ ಪ್ರಕ್ರಿಯೆ ಆರಂಭಿಸಿದರು. ಅವರ ಪ್ರಶ್ನೆಗಳಿಗೆ ವಿವರವಾಗಿ ಉತ್ತರಿಸಿದೆ. ಮಾ.31 ರಂದು ವೈದ್ಯಕೀಯ ಪರೀಕ್ಷೆ ಮಾಡಿಸಿದರು. ಏ.1 ರಂದು ತಾನು ವಾಸಿಸುವ ಸ್ಥಳ ಹಾಗೂ ಕೃತ್ಯ ನಡೆದ ಸ್ಥಳವಾದ ಮಲ್ಲೇಶ್ವರದ ಅಪಾರ್ಟ್ಮೆಂಟ್‌ವೊಂದಕ್ಕೆ ಕರೆದುಕೊಂಡು ಮಹಜರಿಗೆ ಒಳಪಡಿಸಿದರು.

ಅದಾದ ಬಳಿಕ ಮಾರನೇ ದಿನ ವಿಚಾರಣೆ ಮುಂದುವರಿಸಿದರು. ಇವೆಲ್ಲವನ್ನೂ ಗಮನಿಸುತ್ತಿದ್ದರೆ ನಾನು ಪ್ರಕರಣ ಸಂತ್ರಸ್ತೆಯೋ? ಆರೋಪಿಯೋ ಎಂಬ ಅನುಮಾನ ಕಾಡುತ್ತಿದೆ. ಪ್ರಕರಣದ ಆರೋಪಿಗೆ ಕೇವಲ 3 ಗಂಟೆಗಳ ಕಾಲ ವಿಚಾರಣೆ ನಡೆಸಿ, ಬಳಿಕ ವಕೀಲರ ಮೂಲಕ ವಿಚಾರಣೆಗೆ ಹಾಜರಾಗಲು ಅನುಮತಿ ನೀಡಿ ಮುಕ್ತವಾಗಿ ಓಡಾಡಿಕೊಂಡು ಇರಲು ಬಿಟ್ಟಿರುವ ಪೊಲೀಸರು, ನನ್ನನ್ನು ಆರೋಪಿ ರೀತಿ ಒಂದು ದಿನವೂ ಬಿಡುವು ನೀಡದೆ ವಿಚಾರಣೆ ನಡೆಸುತ್ತಿದ್ದಾರೆ. ರಮೇಶ್ ಜಾರಕಿಹೊಳಿ ನೀಡಿದ ದೂರಿನಲ್ಲಿ ನನ್ನ ಹೆಸರು ಇಲ್ಲದಿದ್ದರೂ ಪಿಜಿ ಮೇಲೆ ದಾಳಿ ಮಾಡಿ ಅಲ್ಲಿರುವ ಸಾಕ್ಷ್ಯ ನಾಶ ಮಾಡಿ ನನ್ನನ್ನು ಆರೋಪಿಯನ್ನಾಗಿ ಮಾಡುವಂತೆ ಸರಕಾರದ ಮೇಲೆ ಒತ್ತಡ ಹಾಕಿಸುತ್ತಿದ್ದಾರೆ ಎಂದು ಯುವತಿ ಆರೋಪಿಸಿದ್ದಾಳೆ.

ನಾನು ಪ್ರಕರಣದ ದೂರುದಾರಳಾಗಿದ್ದು, ನನ್ನ ಚಾರಿತ್ರ್ಯ ವಧೆ ಮಾಡುವ ಷಡ್ಯಂತ್ರವನ್ನು ಜಾರಕಿಹೊಳಿ ಮಾಡುತ್ತಿದ್ದಾರೆ. ಎಸ್‌ಐಟಿ ಮೇಲೆ ತೀವ್ರ ಒತ್ತಡವನ್ನು ಸರಕಾರದ ಮೂಲಕ ಹಾಕಿಸಿದ್ದಾರೆ. ಪ್ರತಿನಿತ್ಯ ಮಾಧ್ಯಮಗಳಲ್ಲಿ ನಾನು ಅತ್ಯಾಚಾರದ ಸಂತ್ರಸ್ತೆ ಎಂದು ಮರೆಮಾಚಲು ಸೃಷ್ಟಿತ ಸುದ್ದಿಗಳನ್ನು ಅವಹೇಳನಕಾರಿಯಾಗಿ ಪ್ರಸಾರ ಮಾಡಲಾಗುತ್ತಿದೆ. ಇದುವರೆಗೂ ನಾನು ನೀಡಿದ ದೂರಿನ ಮೇರೆಗೆ ಆರೋಪಿ ವಿರುದ್ಧ ಗಂಭೀರವಾಗಿ ವಿಚಾರಣೆ ನಡೆಸುತ್ತಿರುವ ಬಗ್ಗೆ ನನಗೆ ವಿಶ್ವಾಸ ಮೂಡಿಲ್ಲ. ಇದರ ಜತೆ ಮುಖ್ಯಮಂತ್ರಿಗಳೇ ರಮೇಶ್ ಜಾರಕಿಹೊಳಿ ನಿರ್ದೋಷಿಯಾಗಿ ಹೊರಬರಲಿದ್ದಾರೆ ಎಂದು ಹೇಳಿರುವುದು ನನಗೆ ಆತಂಕ ಮೂಡಿಸಿದೆ. ನನ್ನ ಸಹಮತವಿಲ್ಲದೆ ಪ್ರಕರಣ ಸಂಬಂಧ ಗೃಹ ಇಲಾಖೆ ವಿಶೇಷ ಅಭಿಯೋಜಕರನ್ನು ನೇಮಿಸಿರುವುದಕ್ಕೆ ನನ್ನ ಆಕ್ಷೇಪವಿದೆ. ಇಡೀ ಪ್ರಕರಣವನ್ನು ನಿಷ್ಪಕ್ಷಪಾತವಾಗಿ ನಿರ್ವಹಿಸುತ್ತಿರುವ ಬಗ್ಗೆ ನಂಬಿಕೆ ಇಲ್ಲವಾಗಿದೆ. ದಯಮಾಡಿ ತಾವು ಸರಕಾರದ ಒತ್ತಡಕ್ಕೆ ಮಣಿಯದೆ, ಆರೋಪಿಗೆ ಯಾವುದೇ ರಿಯಾಯಿತಿ ನೀಡದೆ ನ್ಯಾಯಸಮ್ಮತ ವಿಚಾರಣೆ ನಡೆಸಬೇಕು ಎಂದು ಯುವತಿ ಮನವಿ ಮಾಡಿದ್ದಾಳೆ.